# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:129 RNI NO.KAR KAN/2003/10452:No./PMG/KA/NK/BM/743/24-26 ಬುಧವಾರ ದಿನಾಂಕ: 17-04-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## ಚಿತ್ರರಂಗದ ಹಿರಿಯ ನಟ ನಿರ್ಮಾಪಕ ದ್ವಾರಕೀಶ್ ನಿಧನ

ಬೆಂಗಳೂರು: ಕನ್ನಡ ಚಿತ್ರರಂಗದ ಹಿರಿಟ ನಟ ಹಾಗೂ ನಿರ್ಮಾಪಕ ದ್ವಾರಕೀಶ್ (81) ಅವರು ಮಂಗಳವಾರ ನಿಧನರಾಗಿದ್ದಾರೆ.

ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ದ್ವಾರಕೀಶ್ ಅವರು ಹೃದಯಾಘಾತದಿಂದ ಇಂದು ಇಹಲೋಕ ತ್ಯಜಿಸಿದ್ದಾರೆಂದು ಮೂಲಗಳು ತಿಳಿಸಿವೆ.

1942, ಆಗಸ್ಟ್ 19 ರಂದು ಹುಣಸೂರು ನಲ್ಲಿ ಶಮಾರಾವ್ ಮತ್ತು ಜಯಮ್ಮರವರಿಗೆ ಜನಿಸಿದ ದ್ವಾರಕೀಶ್ ಅವರು, ನಟ, ನಿರ್ದೇಶಕ ಮತ್ತು ನಿರ್ಮಾಪಕ. ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಸದಸ್ಯರಾಗಿದ್ದರು.

ಮೈಸೂರಿನ ಶಾರದಾ ವಿಲಾಸ್ ಮತ್ತು ಬನುಮಯ್ಯ ಶಾಲೆಯಲ್ಲಿ ತನ್ನ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ನಂತರ ಅಕಅ ಪಾಲಿಟೆಕ್ನಿಕ್ನಿಂದ ಮೆಕ್ಯಾನಿಕಲ್ ಇಂಜಿನಿಯರಿಂಗ್ ಡಿಪ್ಲೊಮಾ ಕೋರ್ಸ್ ಮುಗಿಸಿದರು, ನಂತರ ಅವರ ಸೋದರನ ಜೊತೆ ಸೇರಿ ಭಾರತ್ ಆಟೋ ಸ್ಪೇರ್ ಸ್ಟೋರ್ ಶುರುಮಾಡಿದರು. 1963ರಲ್ಲಿ ವ್ಯಾಪಾರ ಬಿಟ್ಟು ಸಿನಿಮಾ ನಟನೆಯನ್ನು ಆಯ್ದುಕೊಂಡರು.

ನಟ ದ್ವಾರಕೀಶ್ ಅವರು ಕನ್ನಡ ಚಿತ್ರರಂಗದಲ್ಲಿ ಬಹುದೊಡ್ಡ ಹೆಸರು ಮಾಡಿದ್ದಾರೆ. ಹಲವಾರು ವರ್ಷಗಳಿಂದ ಕನ್ನಡ ಚಿತ್ರರಂಗದಲ್ಲಿ ಗಣನೀಯ ಸೇವೆ ಸಲ್ಲಿಸಿದ ಅವರನ್ನು ಪರಿಗಣಿಸಿ ಬೆಂಗಳೂರು ವಿಶ್ವವಿದ್ಯಾನಿಲಯವು ಗೌರವ ಡಾಕ್ಟರೇಟ್ ನೀಡಿದೆ.

ನಟರಾಗಿ, ನಿರ್ದೇಶಕ, ನಿರ್ಮಾಪಕರಾಗಿ ಹಲವಾರು ಚಿತ್ರಗಳ ಕೊಡುಗೆ ನೀಡಿರುವ ಅವರು ಕನ್ನಡ ಚಿತ್ರರಂಗಕ್ಕೆ ಕಲಾಸೇವೆ ಸಲ್ಲಿಸಿದ್ದಾರೆ. ಡಾ. ವಿಷ್ಣುವರ್ಧನ್, ಡಾ. ರಾಜ್‌ಕುಮಾರ್ ಹಾಗೂ ಅಂಬರೀಶ್ ರಂತಹ ಮೇರು ನಟರೊಂದಿಗೆ ಹಿರಿಯ ತೆರೆಯಲ್ಲಿ ಮಿಂಚಿರುವ ನಟ ದ್ವಾರಕೀಶ್ ಅವರು ನೂರಾರು ಸಿನಿಮಾಗಳಲ್ಲಿ ನಟಿಸಿದ್ದಾರೆ. 40ಕ್ಕೂ ಹೆಚ್ಚು ಸಿನಿಮಾಗಳ ನಿರ್ಮಾಣ ಮಾಡಿ



ಸೈ ಎನಿಸಿಕೊಂಡಿರುವ ಅವರು ಕನ್ನಡ ಜನತೆಗೆ ಪ್ರಚಂಡಕುಳ್ಳ ಎಂದೇ ಜನಪ್ರಿಯರು.

## ಲೋಕಸಭಾ ಚುನಾವಣೆ: ಇಂದು 5 ಅಭ್ಯರ್ಥಿಗಳಿಂದ ನಾಮಪತ್ರಗಳ ಸಲ್ಲಿಕೆ

ಕೊಪ್ಪಳ, ಏಪ್ರಿಲ್ 16 : ಲೋಕಸಭಾ ಚುನಾವಣೆ-2024ರ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ನಲಿನ್ ಅತುಲ್ ಅವರು ನಾಮ ಪತ್ರ ಸಲ್ಲಿಕೆಯ ಮೂರನೇ ದಿನವಾದ ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಭ್ಯರ್ಥಿಗಳಿಂದ ಚುನಾವಣಾ ನಾಮಪತ್ರಗಳನ್ನು ಸ್ವೀಕರಿಸಿದರು.8-ಕೊಪ್ಪಳ ಲೋಕಸಭಾ ಕ್ಷೇತ್ರಕ್ಕೆ ನಾಮಪತ್ರ




ಸಲ್ಲಿಕೆ ಏಪ್ರಿಲ್ 12 ರಿಂದ ಆರಂಭವಾಗಿದ್ದು, ಮಂಗಳವಾರದಂದು ಭಾರತೀಯ
ರಾಷ್ಟ್ರೀಯ ಕಾಂಗ್ರೆಸ್ (ಐ) ಪಕ್ಷದ ಅಭ್ಯರ್ಥಿಯಾಗಿ ರಾಜಶೇಖರ ಕುಯ್ಯಪ್ಪನರ ಹಾಗೂ ಪಕ್ಷೇತರ ಅಭ್ಯರ್ಥಿಗಳಾಗಿ ಮಲ್ಲಿಕಾರ್ಜುನ ಹಡಪದ, ಹನಮೇಶ, ಇಮಾಮಸಾಬ ಮುಲ್ಲಾ ಮತ್ತು ದುರ್ಗಾ ಪ್ರಸಾದ್ ಡಿ. ಅವರು ತಲಾ 01 ನಾಮಪತ್ರ ಸಲ್ಲಿಸಿದ್ದು, ಈ ಐದು ಅಭ್ಯರ್ಥಿಗಳಿಂದ ಒಟ್ಟು 5 ಚುನಾವಣಾ ನಾಮಪತ್ರಗಳು ಮೂರನೇ ದಿನ ಸಲ್ಲಿಕೆಯಾಗಿವೆ.

## ಚಿಕ್ಕೋಡಿ ಲೋಕಸಭಾ ಮತಕ್ಷೇತ್ರ: ನಿಯಂತ್ರಣ ಕೊಠಡಿಗೆ ವೆಚ್ಚ ವೀಕ್ಷಕರ ಅನೀರಿಕ್ಷಿತ ಭೇಟಿ

ಬೆಳಗಾವಿ,ಏ.16: ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಒಟ್ಟು ಎಂಟು ವಿಧಾನಸಭಾ ಮತಕ್ಷೇತ್ರಗಳಿಗೆ ಸಂಬಂದಿಸಿದಂತೆ ಇಬ್ಬರು ವೆಚ್ಚ ವೀಕ್ಷಕರನ್ನು ನೇಮಿಸಲಾಗಿದ್ದು, ನಪ್ಪಾಣಿ, ಚಿಕ್ಕೋಡಿ,-ಸದಲಗಾ, ಹುಕ್ಕೇರಿ, ಯಮಕನಮರಡಿ ವಿಧಾನ ಸಭಾ ವೆಚ್ಚ ವೀಕ್ಷಕರಾದ ಐ.ಆರ್.ಎಸ್. ಅಧಿಕಾರಿ ಎನ್.ಮೋಹನ ಕೃಷ್ಣ ಅವರು ಭಾನುವಾರ (ಏ.14) ರಂದು ಸಾಯಂಕಾಲ ಚಿಕ್ಕೋಡಿ ಲೋಕಸಭಾ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಸ್ಥಾಪಿಸಲಾಗಿರುವ ನಯಂತ್ರಣ ಘಟಕಕ್ಕೆ ಅನೀರಿಕ್ಷಿತವಾಗಿ ಭೇಟಿ ನೀಡಿ ಪರಿಶೀಲಿಸಿದರು.

ನಯಂತ್ರಣ ಘಟಕದ ಕಾರ್ಯವೈಖರಿ ಬಗ್ಗೆ ಮಾಹಿತಿ ಪಡೆದ ವೆಚ್ಚ ವೀಕ್ಷಕರು ಚುನಾವಣಾ ಅಕ್ರಮಗಳನ್ನು ನಯಂತ್ರಿಸಲು ಸ್ಥಾಪಿಸಲಾಗಿರುವ ಚೆಕ್ ಪೋಸ್ಟಗಳ ಮೇಲೆ ನರಂತರ ನಗಾವಹಿಸಲು ತಿಳಿಸಿದರು. ಅಲ್ಲದೇ ಮಾಧ್ಯಮಗಳಲ್ಲಿ ಬರುವಂತಹ ಕಾಸಿಗಾಗಿ ಸುದ್ಧಿ, ಮಾದರಿ ನೀತಿ ಸಂಹಿತೆ ಉಲ್ಲಂಘನೆಗೆ ಸಂಬಂಧಿಸಿದ ವಿಳಯಗಳು ಬಿತ್ತರವಾದಲ್ಲಿ ಕೂಡಲೇ ಮಾಹಿತಿ ಒದಗಿಸಬೇಕು. ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ಧಿಗಳ ಮೇಲೆ ನರಂತರ ನಗಾವಹಿಸುವಂತೆ ವೆಚ್ಚ ವೀಕ್ಷಕರು ಸಿಬ್ಬಂದಿಗಳಿಗೆ ತಿಳಸಿದರು.

ಈ ಸಂದರ್ಭದಲ್ಲಿ ಚಿಕ್ಕೋಡಿ ತಹಶೀಲ್ದಾರ ಚಿದಂಬರ ಕುಲಕರ್ಣಿ, ಸಹಾಯಕ ವೆಚ್ಚ ವೀಕ್ಷಕರು ಮತ್ತು ನೋಡೆಲ್ ಅಧಿಕಾರಿಗಳು ಲೆಕ್ಕ ಪತ್ರ ತಂಡ ಎಸ್.ಕೆ.ನರಗಟ್ಟಿ ಸೇರಿದಂತೆ ನಯಂತ್ರಣ ಘಟಕ, ಲೆಕ್ಕಪತ್ರ ಘಟಕದ ಸಿಬ್ಬಂದಿಗಳು ಹಾಜರಿದ್ದರು.

ಇದಕ್ಕೂ ಮುನ್ನ ನಪ್ಪಾಣಿ, ಚಿಕ್ಕೋಡಿ-ಸದಲಗಾ, ಹುಕ್ಕೇರಿ ಹಾಗೂ ಯಮಕನಮರಡಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಸ್ಥಾಪಿಸಲಾಗಿರುವ ವಿವಿಧ ಚೆಕ್ ಪೋಸ್ಟಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

### ತಾಲೂಕು ಸ್ವೀಪ್ ಸಮಿತಿಯಿಂದ ಕಾಲ್ನಡಿಗೆ ಮತದಾನ ಜಾಗೃತಿ ಜಾಥಾಗೆ ಚಾಲನೆ

## ಪ್ರಜಾಪ್ರಭುತ್ವ ಹಬ್ಬದಲ್ಲಿ ಖುಷಿಯಿಂದ ಪಾಲ್ಗೊಳ್ಳಿ : ತಹಶೀಲ್ದಾರ್ ವಿಶ್ವನಾಥ ಮುರಡಿ

ಕೊಪ್ಪಳ ಏಪ್ರಿಲ್ 16: ಚುನಾವಣೆ ಎಂಬುದು ಪ್ರಜಾಪ್ರಭುತ್ವದ ಹಬ್ಬ ಇದ್ದಂತೆ. ಎಲ್ಲರೂ ಖುಷಿಯಿಂದ ಪಾಲ್ಗೊಳ್ಳಬೇಕು ಎಂದು ಕನಕಗಿರಿ ತಹಶೀಲ್ದಾರ್ ವಿಶ್ವನಾಥ ಮುರುಡಿ ಅವರು ಹೇಳಿದರು.




ಪಟ್ಟಣದ ಸುವರ್ಣಗಿರಿ ಕಲ್ಮಠದಿಂದ ವಾಲ್ಮೀಕಿ ವೃತ್ತದವರೆಗೆ ತಾಲೂಕು ಸ್ವೀಪ್ ಸಮಿತಿಯಿಂದ ಮತದಾನ ಜಾಗೃತಿಗಾಗಿ ಮಂಗಳವಾರ ಆಯೋಜಿಸಿದ್ದ ಸ್ವೀಪ್ ಮತದಾನ ಜಾಗೃತಿಯ ವಾಕಥಾನ್‌ಗೆ ಚಾಲನೆ ನೀಡಿ ಅವರು ಮಾತನಾಡಿದರು.

ಮೇ 07 ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಎಲ್ಲರೂ ತಪ್ಪದೇ ಮತದಾನ ಮಾಡಬೇಕು. ಸದೃಢ ದೇಶ ಕಟ್ಟಲು ಶೇ.100 ರಷ್ಟು ಮತದಾನ ಆಗಬೇಕು. ಯಾರೊಬ್ಬರೂ ಮತದಾನ ಪ್ರಕ್ರಿಯೆಯಿಂದ ದೂರ ಉಳಿಯಬಾರದು ಎಂದರು.

ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಎಲ್.ವಿರೇಂದ್ರಕುಮಾರ್ ಅವರು ಮಾತನಾಡಿ, ಕಡ್ಡಾಯವಾಗಿ ಪ್ರತಿಯೊಬ್ಬರೂ ಮತದಾನ ಮಾಡಬೇಕು. ಮತದಾನ ಪವಿತ್ರವಾದದ್ದು, ಯಾರೂ ಮತದಾನದಿಂದ ಹೊರಗುಳಿಯದೇ, ಕಡ್ಡಾಯವಾಗಿ ಮತದಾನ ಮಾಡುವಂತೆ ತಿಳಿಸಿದರು.

ಚುನಾವಣಾ ರಾಯಭಾರಿಗಳಾದ ಡಾ.ಶಿವಕುಮಾರ್ ಮಾಲಿಪಾಟೀಲ್ ಅವರು ಜಾಥಾದಲ್ಲಿ ಪಾಲ್ಗೊಂಡು, ಮೇ.07 ರಂದು ಲೋಕಸಭಾ ಚುನಾವಣೆ ಮತದಾನ ನಡೆಯಲಿದೆ. ಯಾರೂ ಕೂಡ ಆ ದಿನ ಬೇರೆಡೆ ತೆರಳದೆ ಕಡ್ಡಾಯವಾಗಿ ಮತ ಚಲಾಯಿಸಬೇಕು. ಯಾವುದೇ ಆಸೆ, ಆಮೀಷಕ್ಕೆ ಬಲಿಯಾಗದೆ ಮತದಾನ ಮಾಡಬೇಕು ಎಂದರು.

ಜಾಗೃತಿ ಜಾಥಾದಲ್ಲಿ ವಿವಿಧ ಇಲಾಖೆ ಸಿಬ್ಬಂದಿಗಳು ಸೇರಿ ಒಟ್ಟು 250 ಕ್ಕೂ ಹೆಚ್ಚು ಜನರು ವಾಕಥಾನ್‌ನಲ್ಲಿ ಭಾಗವಹಿಸಿ ಮತದಾನ ಜಾಗೃತಿ ಮೂಡಿಸಿದರು. ಪಟ್ಟಣದ ಎದುರು ಹನುಮಪ್ಪ ದೇಗುಲದಿಂದ ಬಸ್ ನಲ್ದಾಣ ಹಾಗೂ ವಾಲ್ಮೀಕಿ ವೃತ್ತದವರೆಗೆ ನಡೆದ ವಾಕಥಾನ್ ಜಾಥಾದಲ್ಲಿ ಮತದಾನ ಜಾಗೃತಿ ಗೀತೆಗಳು, ಘೋಷಣೆಗಳ ಮೂಲಕ ಅರಿವು ಮೂಡಿಸಲಾಯಿತು.ಈ ವೇಳೆ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿ ದತ್ತಾತ್ರೇಯ ಹೆಗಡೆ, ಸಿಡಿಪಿಓ ವಿರುಪಾಕ್ಷಿ, ತಾ.ಪಂ ಸಹಾಯಕ ನರ್ದೇಶಕ ಚಂದ್ರಶೇಖರ್ ಬಿ ಕಂದಕೂರ್, ತಾಲೂಕು ಯೋಜನಾಧಿಕಾರಿ ರಾಜಶೇಖರ್ ಸೇರಿದಂತೆ ತಾಪಂ ಅಧಿಕಾರಿಗಳು, ಪಟ್ಟಣ ಪಂಚಾಯತ್ ಸಿಬ್ಬಂದಿಗಳು, ಎಲ್ಲ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು, ಆರೋಗ್ಯ, ಕಂದಾಯ ಇಲಾಖೆ ಸಿಬ್ಬಂದಿಗಳು, ನರೇಗಾ ಸಿಬ್ಬಂದಿಗಳು, ಅಂಗನವಾಡಿ, ಆಶಾ ಕಾರ್ಯಕರ್ತರು, ಎನ್.ಆರ್.ಎಲ್.ಎಂ ಯೋಜನೆ ಸಿಬ್ಬಂದಿಗಳು ಇದ್ದರು.

### ಆರೋಗ್ಯಕರ ಆಯುಷ ಪಾನಕ ಪರಿಚಯ

## ಬಾಯಾರಿಕೆ ನೀಗಿಸಲು ಹುಣಸೆ ಹಣ್ಣಿನ ಪಾನಕ ಸೇವಿಸಲು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸಲಹೆ

ಬೆಳಗಾವಿ,ಏ.16: ಬಿಸಿಲಿನ ಬೇಗೆ ತೀವ್ರವಾಗಿರುವುದರಿಂದ ಶರೀರದ ದಾಹ ಹಾಗೂ ಬಾಯಾರಿಕೆಯನ್ನು ನೀಗಿಸಲು ಆಯುಷ್ ಇಲಾಖೆ ಪರಿಚಯಿಸಿರುವ ಚಿಂಚಾ ಪಾನಕ(ಹುಣಸೆ ಹಣ್ಣಿನ ಪಾನಕ)ವನ್ನು ಸಾರ್ವಜನಕರು ಸೇವಿಸಬೇಕು ಎಂದು ಜಿಲ್ಲಾಧಿಕಾರಿ ನತೇಶ್ ಪಾಟೀಲ ಸಲಹೆ ನೀಡಿದರು.ಜಿಲ್ಲಾಧಿಕಾರಿ ಕಚೇರಿಯು ಆವರಣದಲ್ಲಿ



ಮಂಗಳವಾರ(ಏ.16) ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಆಯುಷ್ ಇಲಾಖೆಯ ವತಿಯಿಂದ ಆರೋಗ್ಯಕರ ಚಿಂಚಾ ಪಾನಕ(ಹುಣಸೆ ಹಣ್ಣಿನ ಪಾನಕ)ವನ್ನು ಸಾರ್ವಜನಕರು ಹಾಗೂ ಕರ್ತವ್ಯನರತ ಕಚೇರಿಯ ಸಿಬ್ಬಂದಿಗೆ ವಿತರಿಸಿ ಮಾತನಾಡಿದರು.

ಎಲ್ಲೆಡೆ ಬಿಸಿಲಿನ ತಾಪ ಹೆಚ್ಚುತ್ತಿರುವುದರಿಂದ ಆರೋಗ್ಯ ರಕ್ಷಣೆಗೆ ದೇಹವನ್ನು ತಂಪಾಗಿಟ್ಟುಕೊಳ್ಳುವುದು ಅಗತ್ಯವಾಗಿದೆ. ಆದ್ದರಿಂದ ಹೆಚ್ಚು ಹೆಚ್ಚು ನೀರು ಕುಡಿಯುವುದರ ಜತೆಗೆ ಆಯುಷ್ ಇಲಾಖೆಯಿಂದ ಪರಿಚಯಿಸಲಾಗುವ ಪಾನಕ ಮತ್ತಿತರರ ಪಾನೀಯ ಸೇವಿಸುವಂತೆ ತಿಳಿಸಿದರು.

ಇದೇ ವೇಳೆ ಮಾತನಾಡಿದ ಜಿಲ್ಲಾ ಆಯುಷ್ ಇಲಾಖೆಯ ಅಧಿಕಾರಿ ಡಾ.ಶ್ರೀಕಾಂತ ಸುಣಧೋಳಿ ಅವರು, ಹುಣಸೆ ಹಣ್ಣಿನ ಪಾನಕ ಸೇವನೆಯಿಂದ ಜೀರ್ಣಕ್ರಿಯೆ ಉತ್ತಮಗೊಳ್ಳುವುದರ ಜತೆಗೆ ಬಾಯಾರಿಕೆ ನವಾರಿಸಲಿದೆ ಎಂದರು.

ಚುನಾವಣಾ ತರಬೇತಿ ನೋಡಲ್ ಅಧಿಕಾರಿ ಶಂಕರಾನಂದ ಬನಶಂಕರಿ, ಆಯುಷ್ ಇಲಾಖೆಯ ಡಾ.ಚಂದ್ರಶೇಖರ್ ಸಿದ್ದಾಪುರ, ಡಾ.ಸುಚೇತಾ ದೇಸಾಯಿ, ವಾರ್ತಾ ಇಲಾಖೆಯ ಉಪ ನರ್ದೇಶಕ ಗುರುನಾಥ ಕಡಬೂರ ಹಾಗೂ ಜಿಲ್ಲಾಧಿಕಾರಿ ಕಚೇರಿಯ ಸಿಬ್ಬಂದಿ ಉಪಸ್ಥಿತರಿದ್ದರು.

ಪಾನಕ ತಯಾರಿಸುವ ವಿಧಾನ: ಪ್ರತಿದಿನ 50 ರಿಂದ 100 ಮಿ.ಲೀ. ಪಾನಕವನ್ನು ಸೇವಿಸಬಹುದು. ಹುಣಸೆ ಹಣ್ಣು(100 ಗ್ರಾಂ), ಬೆಲ್ಲದ ಪುಡಿ(400 ಗ್ರಾಂ), ಜೀರಿಗೆ ಪುಡಿ(10 ಗ್ರಾಂ), ಕಾಳು ಮೆಣಸಿನಪುಡಿ(5 ಗ್ರಾಂ) ಹಾಗೂ ಸೈಂದವ ಲವಣ(5 ಗ್ರಾಂ) ಬಳಸಿಕೊಂಡು ಪಾನಕ ತಯಾರಿಸಬಹುದು. ಹುಣಸೆ ಹಣ್ಣು ರಾತ್ರಿಯಿಡೀ ನೆನೆಸಿಡಬೇಕು; ಮರುದಿನ ಬೆಳಿಗ್ಗೆ ಕೈಯಿಂದ ಹಿಸುಕಿ ಬಾಟಲಿಗಳಲ್ಲಿ ಸೋಸಿಟ್ಟುಕೊಂಡು ಪಾನಕ ತಯಾರಿಕೆಗೆ ಬೇಕಾದಷ್ಟು ಬಳಸಬಹುದು.

ಅಗತ್ಯ ಪ್ರಮಾಣದ ನೀರನ್ನು ಪಾತ್ರೆಗೆ ಹಾಕಿ ಹುಣಸೆ ಹಣ್ಣಿನ ಮಿಶ್ರಣವನ್ನು ಬೆರೆಸಿ ಇದರೊಂದಿಗೆ ಬೆಲ್ಲದ ಪುಡಿಯನ್ನು ಹಾಕಿ ಕರಗಿಸಬೇಕು. ಕೊನೆಯಲ್ಲಿ ನರ್ದಿಷ್ಟ ಪ್ರಮಾಣದಲ್ಲಿ ಜೀರಿಗೆ ಪುಡಿ, ಕಾಳುಮೆಣಸಿನ ಪುಡಿ ಮತ್ತು ಸೈಂದವ ಲವಣವನ್ನು ಸೇರಿಸಿದರೆ ಪಾನಕ ಸಿದ್ಧವಾಗುತ್ತದೆ.

### ಅಗತ್ಯ ಸೇವೆಗಳಡಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳು ಮತದಾನದಿಂದ ವಂಚಿತರಾಗದಂತೆ ನಿಗಾವಹಿಸಿ

## ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಸೂಚನೆ

ಚಿಕ್ಕೋಡಿ(ಏ.16): ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ ಅಗತ್ಯ ಸೇವೆಗಳಡಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಹಾಗೂ ಮತದಾನ ದಿನದಂದು ಕಾರ್ಯ



ನಿರ್ವಹಿಸುವ ಚುನಾವಣಾ ಸಿಬ್ಬಂದಿಗಳು ಮತದಾನದಿಂದ ವಂಚಿತರಾಗದಂತೆ ಅಗತ್ಯದ ಕ್ರಮಕೈಗೊಳ್ಳಲು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ ಸಿ.ಇ.ಓ. ಆದ ರಾಹುಲ ಶಿಂಧೆ ಅವರು ಸೂಚನೆ ನೀಡಿದರು.ಚಿಕ್ಕೋಡಿ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ (ಏ.16)ರಂದು ಜರುಗಿದ ಸಹಾಯಕ ಚುನಾವಣಾಧಿಕಾರಿ ಗಳೊಂದಿಗಿನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಅಗತ್ಯ ಸೇವೆಗಳಡಿ ಹಾಗೂ ಮತದಾನದ ದಿನದಂದು ಕಾರ್ಯನಿರ್ವಹಿಸುವ ಪ್ರತಿಯೊಬ್ಬ ಅಧಿಕಾರಿ ಸಿಬ್ಬಂದಿಗಳಿಗೆ ವಿತರಿಸಲಾದ ನಿಗದಿತ ನಮೂನೆ ಗಳನ್ನು ಕ್ರೋಢಿಕರಿಸಿ ಸಿಬ್ಬಂದಿಗಳಿಗೆ ನಿಗದಿಪಡಿಸಲಾದ ದಿನಾಂಕದಂದು ಮತದಾನಕ್ಕೆ ವ್ಯವಸ್ಥೆ ಕಲ್ಪಿಸಬೇಕು. ಈ ಪ್ರಕ್ರಿಯೆಯಲ್ಲಿ ಯಾವೊಬ್ಬ ಅಧಿಕಾರಿ ಸಿಬ್ಬಂದಿ ಮತದಾನದಿಂದ ವಂಚಿತರಾಗದಂತೆ ನಿಗಾವಹಿಸಲು ಅವರು ತಿಳಿಸಿದರು.ಎಂಭೈತ್ತೈದು ವರ್ಷ ಮೇಲ್ಪಟ್ಟ ವಯೋವೃದ್ಧರಿಗೆ ಮನೆಯಿಂದಲೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ ಗುರುತಿಸಲಾದ ಎಂಭೈತ್ತೈದು ವರ್ಷ ಮೇಲ್ಪಟ್ಟವರಿಗೆ ನಿಗದಿತ ವೇಳಾಪಟ್ಟಿಯಂತೆ ಮತದಾನ ಪ್ರಕ್ರಿಯೆ ಕೈಗೊಳ್ಳಬೇಕು. ಈ ಪ್ರಕ್ರಿಯೆಯಲ್ಲಿ ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ವಯ ಮತದಾನಕ್ಕೆ ಅಗತ್ಯದ ವ್ಯವಸ್ಥೆಗಳನ್ನು ಮಾಡಿಕೊಳ್ಳಬೇಕು. ಮನೆ ಮನೆಗೆ ಮತದಾನ ಪ್ರಕ್ರಿಯೆಗೆ ಬೇಕಾದ ಸಿಬ್ಬಂದಿ, ವಾಹನ, ಹಾಗೂ ಬೇಕಾದಂತಹ ಸಾಮಗ್ರಿಗಳ ವಿವರಗಳನ್ನು ಒದಗಿಸುವಂತೆ ತಿಳಿಸಿದ ಅವರು ಈ ಪ್ರಕ್ರಿಯೆಗೆ ನಿಯೋಜಿತ ಎಲ್ಲ ಸಿಬ್ಬಂದಿಗಳಿಗೆ ಕಡ್ಡಾಯವಾಗಿ ಗುರುತಿನ ಚೀಟಿ ಹಾಗೂ ಸಮವಸ್ತ್ರದ ವ್ಯವಸ್ಥೆ ಮಾಡಬೇಕು. ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ ಗುರುತಿಸಲಾಗುವ ಸೂಕ್ಷ ?? ಹಾಗೂ ಅತೀ ಸೂಕ್ಷ ?? ಮತಗಟ್ಟೆಗಳ ವ್ಯಾಪ್ತಿಯಲ್ಲಿನ ಮತದಾರರಲ್ಲಿ ಆತ್ಮ ವಿಶ್ವಾಸ ಹೆಚ್ಚಿಸಲು ಹೆಚ್ಚಿನ ಸ್ವೀಪ್ ಚಟುವಟಿಕೆ, ಪೋಲಿಸ್ ಇಲಾಖೆಯಿಂದ ಪಥಸಂಚಲನ ಆಯೋಜಿಸಬೇಕು ಈ ಕುರಿತು ಈಗಿನಿಂದಲೇ ಅಧಿಕಾರಿಗಳು ಕಾರ್ಯಪ್ರವೃತ್ತರಾಗಿ ರೂಪುರೇಷೆಗಳನ್ನು ತಯಾರಿಸಲು ತಿಳಿಸಿದರು. ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ನಾಮಪತ್ರ ಸಲ್ಲಿಸುವ ಪ್ರಕ್ರಿಯೆ ಪ್ರಾರಂಭವಾಗಿದ್ದು ವಾಹನಗಳ ಕುರಿತು ಅನುಮತಿ ಕೋರಿ ಸಲ್ಲಿಸುವ ಅರ್ಜಿಗಳ ಕುರಿತು ಕುಲಂಕೂಷವಾಗಿ ಪರಿಶೀಲಿಸಿ ಅನುಮತಿ ನೀಡುವದು. ಅಲ್ಲದೇ ಅನುಮತಿ ನೀಡಿದರ ವೆಚ್ಚದ ಮಾಹಿತಿಯನ್ನು ಕೂಡಲೇ ನೀಡಬೇಕು.ಮುಕ್ತ ಹಾಗೂ ನ್ಯಾಯ ಸಮ್ಮತ ಚುನಾವಣೆ ಜರುಗಿಸುವ ನಿಟ್ಟಿನಲ್ಲಿ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದಲ್ಲಿ ರಚಿಸಲಾದ ಎಫ್.ಎಸ್.ಟಿ ಹಾಗೂ ಎಸ್.ಎಸ್.ಟಿ ತಂಡಗಳು ಕ್ರಿಯಾಶೀಲತೆಯಿಂದ ಕಾರ್ಯನಿರ್ವಹಿಸುವದರ ಮೂಲಕ ಚುನಾವಣಾ ಅಕ್ರಮಗಳನ್ನು ನಿಯಂತ್ರಿಸಬೇಕು. ಸಹಾಯಕ ಚುನಾವಣಾಧಿಕಾರಿಗಳು ತಮ್ಮ ವ್ಯಾಪ್ತಿಯ ಚೆಕ್ ಪೋಸ್ಟಗಳಿಗೆ ನಿಯಮಿತವಾಗಿ ಭೇಟಿ ನೀಡುವದು ಹಾಗೂ ಸ್ಟ್ರಾಂಗ್ ರೂಂಗಳಿಗೆ ಭೇಟಿ ನೀಡಿ ಅಲ್ಲಿನ ಭದ್ರತೆ ಬಗ್ಗೆ ನಿಯಮಿತವಾಗಿ ಪರಿಶೀಲಿಸುವಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.ಸಭೆಯಲ್ಲಿ ಚುನಾವಣಾಧಿಕಾರಿಗಳ ಕಚೇರಿಯ ಸಹಾಯ ಚುನಾವಣಾಧಿಕಾರಿ ಬಸವರಾಜ ಅಡವಿಮಠ ಸೇರಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯ ವಿಧಾನಸಭಾ ಮತಕ್ಷೇತ್ರದ ಸಹಾಯಕ ಚುನಾವಣಾಧಿಕಾರಿಗಳು ಹಾಜರಿದ್ದರು.

## ಸಮಾಜದ ಎಲ್ಲಾ ವರ್ಗಗಳ ಅಭಿವೃದ್ಧಿಯನ್ನು ಉತ್ತೇಜಿಸುವ ಗುರಿ: ಕಡಾಡಿ

ಬೆಳಗಾವಿ: ಇಂದು ಭಾವುಕರಾಗಿ ಮಾತನಾಡಿದ ಈರಣ್ಣ ಕಡಾಡಿ ಅವರು ಬಿಜೆಪಿಯು ಸಹ ಸದಸ್ಯರೊಂದಿಗೆ ಮುಂಬರುವ 2024 ರ ಚುನಾವಣೆಗೆ ಪಕ್ಷದ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದರು, ಇದನ್ನು "ಪ್ರಜಾಪ್ರಭುತ್ವದ ಹಬ್ಬ" ಎಂದು ಶ್ಲಾಘಿಸಿದರು.




ಜಾತಿ ಮತ್ತು ಧರ್ಮದ ಅಡೆತಡೆಗಳನ್ನು ಮೀರಿ ಸಮಾಜದ ಎಲ್ಲಾ ವರ್ಗಗಳ ಅಭಿವೃದ್ಧಿಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ ಪ್ರಣಾಳಿಕೆಯ ಅಂತರ್ಗತ ಸ್ವರೂಪವನ್ನು ಕಡಾಡಿ ಒತ್ತಿ ಹೇಳಿದರು. ಪ್ರಧಾನ ಮೋದಿಯವರ ನೇತೃತ್ವದಲ್ಲಿ, ರೈತರಿಂದ ಸೈನಿಕರವರೆಗೆ ಪ್ರತಿಯೊಬ್ಬ ಭಾರತೀಯನ ಸೇವೆಗೆ ಬಿಜೆಪಿಯ ದಶಕದ ಬದ್ಧತೆಯನ್ನು ಕಡಾಡಿ ಎತ್ತಿ ತೋರಿಸಿದರು.

ರಾಷ್ಟ್ರದ ಮೂಲೆ ಮೂಲೆಗೆ ಪಕ್ಷದ ವ್ಯಾಪ್ತಿಯನ್ನು ವಿಸ್ತರಿಸುವಲ್ಲಿ ಮೋದಿಯವರ ಪ್ರಯತ್ನವನ್ನು ಶ್ಲಾಘಿಸಿದ ಅವರು, ಭಾರತವು ವಿಶ್ವದ 5 ನೇ ಅತಿದೊಡ್ಡ ಆರ್ಥಿಕತೆಯಾಗಿ ಏರಲು ಮೋದಿಯವರ ಸಾಧನೆಗಳು ಕಾರಣವೆಂದು ಹೇಳಿದರು. ಕಡಾಡಿ ಅವರು ಮಹತ್ವಾಕಾಂಕ್ಷೆಯ "ಒಂದು ರಾಷ್ಟ್ರ, ಒಂದು ಚುನಾವಣೆ" ಪ್ರಸ್ತಾವನೆ ಮತ್ತು ಪ್ರತಿಯೊಬ್ಬ ನಾಗರಿಕರಿಗೆ ವಸತಿ ಮತ್ತು ಉಚಿತ ವಿದ್ಯುತ್ ಒದಗಿಸುವ ಭರವಸೆ ಸೇರಿದಂತೆ ಪ್ರಮುಖ ಉಪಕ್ರಮಗಳನ್ನು ವಿವರಿಸಿದರು.

ಪ್ರಣಾಳಿಕೆಯು ಮುದ್ರಾ ಯೋಜನೆಯಂತಹ ಯೋಜನೆಗಳ ಮೂಲಕ ಮಹಿಳಾ ಸಬಲೀಕರಣಕ್ಕೆ ಬೆಂಬಲವನ್ನು ನೀಡುತ್ತದೆ, ಇದು ಈಗ ಉದ್ಯಮಿಗಳಿಗೆ 20 ಲಕ್ಷ ರೂಪಾಯಿಗಳವರೆಗೆ ಸಾಲವನ್ನು ನೀಡುತ್ತದೆ. ಪ್ರತಿಪಕ್ಷಗಳ ಟೀಕೆಗಳಿಗೆ, ಅದರಲ್ಲೂ ವಿಶೇಷವಾಗಿ ಲಾಲು ಪ್ರಸಾದ್ ಯಾದವ್ ಅವರ ಟೀಕೆಗಳಿಗೆ ತಿರುಗೇಟು ನೀಡಿದ ಕಡಾಡಿ, ಪ್ರಧಾನಿಯವರ ಹಿಂದೆ ರಾಷ್ಟ್ರದ ಒಗ್ಗಟ್ಟಿನ ಸಂಕೇತವಾಗಿ "ಮೋದಿ ಪರಿವಾರ" ಎಂಬ ಪದವನ್ನು ಆಹ್ವಾನಿಸಿ ಮೋದಿಯ ಸುತ್ತ ಬೆಂಬಲವನ್ನು ಒಟ್ಟುಗೂಡಿಸಿದರು.

ಬುಲೆಟ್ ಟ್ರೈನ್‌ಗಳ ಪರಿಚಯ ಸೇರಿದಂತೆ ಸಮಗ್ರ ಅಭಿವೃದ್ಧಿ, ಲಿಂಗ ಸಮಾನತೆ ಮತ್ತು ಮೂಲಸೌಕರ್ಯ ಪ್ರಗತಿಗಳ ಮೇಲೆ ಪ್ರಣಾಳಿಕೆಯ ಗಮನವು ಭಾರತವನ್ನು ಉಜ್ವಲ ಭವಿಷ್ಯದತ್ತ ಮುನ್ನಡೆಸುವ ಬಿಜೆಪಿಯ ಬದ್ಧತೆಯನ್ನು ಒತ್ತಿಹೇಳುತ್ತದೆ.

ದಿಗಂತದಲ್ಲಿ ಚುನಾವಣೆಗಳು, ಈ ಪ್ರಣಾಳಿಕೆಯ ಅನಾವರಣವು ಉತ್ಸಾಹಭರಿತ ಚುನಾವಣಾ ಸ್ಪರ್ಧೆಗೆ ವೇದಿಕೆಯನ್ನು ಹೊಂದಿಸುತ್ತದೆ, ಬಿಜೆಪಿಯು ಎಲ್ಲಾ ಭಾರತೀಯರ ಪ್ರಗತಿಯ ಮುನ್ನುಡಿಯಾಗಿ ತನ್ನನ್ನು ತಾನು ಸ್ಥಾಪಿಸಿಕೊಂಡಿದೆ.